ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,**

**ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ,**

**ಬೆಂಗಳೂರು-560 009**

ಸಂಖ್ಯೆ: ಸಿಎಸಿ-04/ಪಪ್ರಾಶಾಶಿನೇ/01/2017-18 ದಿನಾಂಕ: 29/09/2018

## ಪ್ರಕಟಣೆ

ಪದವೀಧರ ಪ್ರಾಥಮಿಕ ಶಾಲೆಗಳ ಶಿಕ್ಷಕರ (6-8ನೇ ತರಗತಿ ವೃಂದ) ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ 1:3 ಅನುಪಾತದ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 27/08/2018ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ. ಸದರಿ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ಜಿಲ್ಲಾ ಹಂತದಲ್ಲಿ ಸಂಬಂಧಿತ ಉಪನಿರ್ದೇಶಕರು (ಆಡಳಿತ)ರವರಿಂದ ಪೂರ್ಣಗೊಳಿಸಿದೆ. ಪರಿಶೀಲನಾ ಸಂದರ್ಭದಲ್ಲಿ ಕಂಡುಬಂದಂತ ತಿದ್ದುಪಡಿಗಳನ್ನು ಆಯಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ)ರವರು ಕೇಂದ್ರೀಕೃತ ದಾಖಲಾತಿ ಘಟಕದಲ್ಲಿ ಸಲ್ಲಿಸಿರುತ್ತಾರೆ. ಅದರಂತೆ ತಿದ್ದುಪಡಿ ಮಾಡಲಾದ ದಾಖಲೆಗಳನ್ನು ಮತ್ತೊಮ್ಮೆ ಪರಿಶೀಲಿಸಿ, ಪಟ್ಟಿಗೆ ಅಳವಡಿಸಿ 1:2 ಅನುಪಾತದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 29/09/2018ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ. ಸದರಿ ಪಟ್ಟಿಗೆ ಸಂಬಂಧಿಸಿದ ವಿವರಗಳನ್ನು ಪೂರ್ಣ ಮಾಹಿತಿಯೊಂದಿಗೆ ದಿನಾಂಕ: 28/09/2018ರಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

ದಾಖಲೆಗಳ ಪರಿಶೀಲನೆಯಾಗದೆ ಉಳಿದ **452** ಅಭ್ಯರ್ಥಿಗಳು ಹಾಗೂ ದಿನಾಂಕ:28/09/2018ರ ಪ್ರಕಟಣೆಯಂತೆ ಹೊಸದಾಗಿ ಸೇರ್ಪಡೆಯಾದ **27** ಅಭ್ಯರ್ಥಿಗಳು ಸೇರಿದಂತೆ ಒಟ್ಟು **479** ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರ ಕಚೇರಿಯಲ್ಲಿ ಸೂಚಿತ ದಿನಾಂಕಗಳಂದು ಹಾಜರಾಗುವುದು. ಈ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಗೈರುಹಾಜರಾದಲ್ಲಿ, ಗೈರುಹಾಜರಾದವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ